ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**
**(ಮುಂದುವರೆದ ಉಪವೇಶನಗಳು)**
**ಬುಧವಾರ, ದಿನಾಂಕ: ೧೫ನೇ ನವೆಂಬರ್, ೨೦೧೭**

---

**ಸಮೂಹ – III**

೧. ಕಂದಾಯ ಸಚಿವರು.
೨. ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು.
೩. ಅರಣ್ಯ ಸಚಿವರು.
೪. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು.
೫. ಕಾರ್ಮಿಕ ಸಚಿವರು.
೬. ವಸತಿ ಸಚಿವರು.
೭. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ಸಚಿವರು

---

## ತುಂಗಭದ್ರಾ ಅಣೆಕಟ್ಟಿನಲ್ಲಿ ತುಂಬಿರುವ ಹೂಳಿನ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೩೭೬ (೩೭೦೦) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಂಗಭದ್ರಾ ಅಣೆಕಟ್ಟಿನಲ್ಲಿ ತುಂಬಿರುವ ೩೨ ಟಿ.ಎಂ.ಸಿ. ಹೂಳು ತುಂಬಿ ನೀರಿನ ಕೊರತೆ ಆಗಿರುವುದನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಎನ್.ಆರ್.ಬಿ.ಸಿ. ೯೫ ಕಿ.ಮೀ. ನಿಂದ ೧೮೦ ಕಿ.ಮೀ. ವರೆಗೂ ಮುಖ್ಯ ಕಾಲುವೆ ನಿರ್ಮಾಣದ ಕಾಮಗಾರಿಗೆ ಖರ್ಚಾಗಿರುವ ವೆಚ್ಚ ಎಷ್ಟು ; ಉಪ ಕಾಲುವೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಎನ್.ಆರ್.ಬಿ.ಸಿ. ನಿಂದ ರಾಯಚೂರು ನಗರ ಹಾಗೂ ಇತರೆ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜು ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ತುಂಗಾಭದ್ರಾ ನದಿ ಪಾತ್ರದಲ್ಲಿ ಗಾದಿಗನೂರ ಯೋಜನೆಯಿಂದ ತುಂಗಾಭದ್ರಾ ಯೋಜನೆ ನಡುವೆ ಎಷ್ಟು ಏತ ನೀರಾವರಿ ಯೋಜನೆಗಳಿವೆ ; ಈ ಏತ ನೀರಾವರಿ ಯೋಜನೆಗಳಿಗೆ ಉಪಯೋಗಿಸುವ ನೀರಿನ ಪ್ರಮಾಣ ಎಷ್ಟು; ಹಾಗೂ ಈ ಏತ ನೀರಾವರಿ ಯೋಜನೆಗಳಿಗೆ ಖರ್ಚಾಗಿರುವ ವೆಚ್ಚ ಎಷ್ಟು?

## ಚಿಕ್ಕಮಗಳೂರು ಜಿಲ್ಲೆಗೆ ಮಂಜೂರಾದ ಮನೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೭೭ (೩೫೦೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬ ರಿಂದ ೨೦೧೬–೧೭ನೇ ಸಾಲಿನವರೆಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ಯೋಜನೆವಾರು ವಿವರ ನೀಡುವುದು)

(ಆ) ಸದರಿ ಮಂಜೂರಾದ ಮನೆಗಳ ಪೈಕಿ ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಎಷ್ಟು ಮನೆಗಳನ್ನು ಹಂಚಿಕೆ ಮಾಡದೇ ರದ್ದುಗೊಳಿಸಲಾಗಿದೆ ; ರದ್ದುಗೊಳ್ಳಲು ಕಾರಣವೇನು ;

(ಈ) ಮಂಜೂರಾದ ಮನೆಗಳಲ್ಲಿ ಎಷ್ಟು ಮನೆಗಳು ಪೂರ್ಣಗೊಂಡಿದೆ ; ಪೂರ್ಣಗೊಳ್ಳದ ಮನೆಗಳ ಸಂಖ್ಯೆ ಎಷ್ಟು ; ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣಗಳೇನು ? (ಪೂರ್ಣ ವಿವರ ಒದಗಿಸುವುದು)

## ಬೆಳಗಾವಿ ಜಿಲ್ಲೆಯ ಕೆರೆಗಳಿಗೆ ನದಿಗಳಿಂದ ಏತ ನೀರಾವರಿ ಮೂಲಕ ನೀರು ತುಂಬಿಸುವ ಯೋಜನೆಗಳು ನೆನಗುದಿಗೆ ಬಿದ್ದಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೮ (೩೬೮೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿ ನದಿಗಳಿಂದ ಕೆರೆಗಳಿಗೆ ಏತ ನೀರಾವರಿ ಮೂಲಕ ನೀರು ತುಂಬಿಸುವ ಯೋಜನೆಗಳು ನೆನಗುದಿಗೆ ಬಿದ್ದಿರುವುದರಿಂದ ಈ

ಭಾಗದ ರೈತರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಕೆರೆ ತುಂಬಿಸುವ ಯೋಜನೆಯಡಿ ಯಾವ ಯಾವ ಕೆರೆಗಳ ಪ್ರಸ್ತಾವನೆಗಳು ಸರ್ಕಾರದ ಮುಂದಿವೆ ; ಅವುಗಳಲ್ಲಿ ಯಾವ ಯಾವ ಕೆರೆಗಳಿಗೆ ನೀರು ತುಂಬಿಸುವ ಯೋಜನಗಳಿಗೆ ಅನುಮೋದನೆ ನೀಡಲಾಗಿದೆ ;

(ಇ) ಈಗಾಗಲೇ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಬಾಕಿ ಇರುವ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಈ) ಸರ್ಕಾರದ ಮುಂದೆ ಬಾಕಿ ಇರುವ ಪ್ರಸ್ತಾವನೆಗಳಿಗೆ ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಲಾಗುವುದು ? (ವಿವರ ನೀಡುವುದು)

## ವಸತಿ ಯೋಜನೆ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) –**

೩೭೯ (೩೬೮೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀಳಗಿ ಪಟ್ಟಣಕ್ಕೆ ವಾಜಪೇಯಿ ವಸತಿ ಯೋಜನೆಯು ಯಾವ ಸಾಲಿನಲ್ಲಿ ಮಂಜೂರಾಗಿದೆ ; ಈ ಯೋಜನೆಗೆ ಮಂಜೂರಾದ ಅನುದಾನವೆಷ್ಟು ;

(ಆ) ಈ ಯೋಜನೆಗೆ ಸ್ವಾಧೀನಪಡಿಸಿಕೊಂಡ ಜಮೀನು ಎಷ್ಟು ; ಇದರಲ್ಲಿ ನಿರ್ಮಿಸಲಾಗಿರುವ ನಿವೇಶನಗಳ ಸಂಖ್ಯೆ ಎಷ್ಟು ; ಈ ನಿವೇಶನಗಳಿಗೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ ; ಆಯ್ಕೆ ಮಾಡಿದ್ದರೆ, ಯಾವ ಮಾನದಂಡವನ್ನು ಅನುಸರಿಸಿ ಆಯ್ಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ನಿಯಮಾನುಸಾರ ಫಲಾನುಭವಿಗಳ ಆಯ್ಕೆಯಾಗಿಲ್ಲವೆಂಬ ಕೂಗು ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ;

(ಈ) ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಗ್ರಾಮ ಮತ್ತು ವಾರ್ಡ್ ಸಭೆಗಳ ಮುಖಾಂತರ ಫಲಾನುಭವಿಗಳ ಆಯ್ಕೆಯನ್ನು ನಂತರ ಸ್ಥಳೀಯ ಸಂಘ ಸಂಸ್ಥೆಗಳ ಸದಸ್ಯರಿಗೆ ಆಯ್ಕೆ ಮಾಡುವ ಅಧಿಕಾರವನ್ನು ನೀಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಆದೇಶದ ಪ್ರಕಾರ ಬೀಳಗಿ ಪಟ್ಟಣದ ವಾಜಪೇಯಿ ವಸತಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ ? (ವಿವರ ನೀಡುವುದು)

## ಕಾರ್ಮಿಕ ಕಲ್ಯಾಣ ನಿಧಿ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮೦ (೩೭೬೭) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರ್ಮಿಕ ಕಲ್ಯಾಣ ಇಲಾಖೆಯಡಿ ಬರುವ ನಿಗಮ, ಮಂಡಳಿ ಸೊಸೈಟಿ ಹಾಗೂ ಇತರ ಸಂಸ್ಥೆಗಳು ಯಾವುವು ; (ವಿವರವಾಗಿ ವಿಳಾಸದೊಂದಿಗೆ ಮಾಹಿತಿ ಕೊಡುವುದು)

(ಆ) ಹಾಲಿ ಕಾರ್ಮಿಕ ಕಲ್ಯಾಣ ನಿಧಿಯಲ್ಲಿ ಇರುವ ಹಣವೆಷ್ಟು ;

(ಇ) ಕಾರ್ಮಿಕರ ಸೌಲಭ್ಯಗಳಿಗೆ ಈವರೆಗೆ ಕಾರ್ಮಿಕರ ಕಲ್ಯಾಣ ನಿಧಿಯಿಂದ ಖರ್ಚಾಗಿರುವ ಹಣವೆಷ್ಟು ; ಯಾವ ಯಾವ ಯೋಜನೆಗಳಿಗೆ ಖರ್ಚು ಮಾಡಲಾಗಿದೆ ; (ವಿವರವಾಗಿ ಮಾಹಿತಿ ಕೊಡುವುದು)

(ಈ) ಕಾರ್ಮಿಕ ಕಲ್ಯಾಣಗಳಲ್ಲಿ ಎಷ್ಟು ಯೋಜನೆಗಳಿವೆ ; ಪ್ರತಿ ಕಲ್ಯಾಣ ಯೋಜನೆಗಳಿಗಾಗಿ ಖರ್ಚಾದ ಹಣವೆಷ್ಟು ;

(ಉ) ಕಳೆದ ೩ ವರ್ಷಗಳಲ್ಲಿ ಸೆಸ್‌ನಿಂದ ಸಂಗ್ರಹವಾದ ಹಣವೆಷ್ಟು ; ಸಂಗ್ರಹಿಸಿದ ಸೆಸ್ ಹಣದಲ್ಲಿ ಖರ್ಚು ಮಾಡಿದ ಹಣದ ವಿವರ ನೀಡುವುದು ?

## ರೈತರ ಜಮೀನಿಗೆ ಪರಿಹಾರ ಧನ ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೧ (೩೭೮೧) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆ ಹಾಸನ ತಾಲ್ಲೂಕು ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ಜಮೀನು ಎಷ್ಟು ;

(ಆ) ಜಮೀನನ್ನು ಕಳೆದುಕೊಂಡಿರುವ ರೈತರಿಗೆ ಸರ್ಕಾರದಿಂದ ಪರಿಹಾರಧನವನ್ನು ಸಂಪೂರ್ಣವಾಗಿ ನೀಡಲಾಗಿದೆಯೇ ; ನೀಡಿದ್ದರೆ, ಎಷ್ಟು ರೈತರಿಗೆ ಎಷ್ಟು ಪರಿಹಾರವನ್ನು ನೀಡಲಾಗಿದೆ ;

(ಇ) ಪರಿಹಾರಧನ ಕಡಿಮೆ ಇದ್ದು ಹೆಚ್ಚು ಪರಿಹಾರಧನ ನೀಡಬೇಕೆಂದು ಯಾರಾದರೂ ನ್ಯಾಯಾಲಯಕ್ಕೆ ಹೋಗಿದ್ದಾರೆಯೇ ; ನ್ಯಾಯಾಲಯದ ತೀರ್ಮಾನದಂತೆ ಹೆಚ್ಚು ಪರಿಹಾರಧನವನ್ನು ಯಾವಾಗ ನೀಡಲಾಗುವುದು ?

## ಗಾರ್ಮೆಂಟ್ಸ್‌ಗಳಲ್ಲಿನ ಮಹಿಳಾ ಕಾರ್ಮಿಕರ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೨ (೩೭೮೩) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಗಾರ್ಮೆಂಟ್ಸ್ ಕಾರ್ಖಾನೆಗಳಿದ್ದು ಅಲ್ಲಿ ದುಡಿಯುತ್ತಿರುವ ಮಹಿಳೆಯರ ಸುರಕ್ಷತೆಗಾಗಿ ಕೈಗೊಂಡಿರುವ ಕ್ರಮವೇನು ;

(ಆ) ಮಹಿಳಾ ಕಾರ್ಮಿಕರ ಮೇಲೆ ಆಗುತ್ತಿರುವ ದೌರ್ಜನ್ಯಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಯಾವ ರೀತಿ ಕ್ರಮ ಕೈಗೊಂಡಿದೆ ;

(ಇ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಅನೇಕ ಗಾರ್ಮೆಂಟ್ಸ್ ಕಾರ್ಖಾನೆಗಳಿದ್ದು ಅಲ್ಲಿನ ಮಹಿಳಾ ಕಾರ್ಮಿಕರ ಮಕ್ಕಳಿಗೆ ಶಿಶು ಪಾಲನಾ ಕೇಂದ್ರಗಳನ್ನು ತೆರೆಯಲಾಗಿದೆಯೇ ; ಇದರ ಬಗ್ಗೆ ಸರ್ಕಾರದ ಕ್ರಮವೇನು ?

## ಹಕ್ಕುಪತ್ರ ವಿತರಣೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೮೩ (೩೬೫೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೯೪–ಸಿ ಮತ್ತು ೯೪–ಸಿಸಿ ಅಡಿಯಲ್ಲಿ ರಾಜ್ಯದಲ್ಲಿ ಸ್ವೀಕರಿಸಿದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ಆ ಪೈಕಿ ಇತ್ಯರ್ಥ ಪಡಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; ಹಕ್ಕುಪತ್ರ ವಿತರಿಸಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ೯೪–ಸಿ ಅಡಿಯಲ್ಲಿ ಸ್ವೀಕರಿಸಿದ ಅರ್ಜಿ ಎಷ್ಟು; ಇತ್ಯರ್ಥಪಡಿಸಿ ಹಕ್ಕುಪತ್ರ ನೀಡಿದ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕುಮ್ಕಿ ಭೂಮಿಯಲ್ಲಿ ವಾಸವಾಗಿರುವವರಿಗೆ ೯೪–ಸಿ ಯಡಿಯಲ್ಲಿ ಹಕ್ಕುಪತ್ರ ನೀಡಲಾಗಿದೆಯೇ ; ನೀಡಲಾಗಿದ್ದರೆ ಎಷ್ಟು ಮಂದಿಗೆ ವಿತರಿಸಲಾಗಿದೆ ; ಇಲ್ಲದಿದ್ದರೆ, ಕಾರಣಗಳೇನು ; (ವಿವರ ಒದಗಿಸುವುದು)

(ಈ) ಡೀಮ್ಡ್ ಫಾರೆಸ್ಟ್ ಸ್ಥಳದಲ್ಲಿ ವಾಸವಾಗಿರುವವರಿಗೆ ಹಕ್ಕುಪತ್ರ ನೀಡುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಪರಿಶಿಷ್ಟ ಪಂಗಡ ಪ್ರಮಾಣಪತ್ರ ವಿತರಣೆಯಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೩೮೪ (೩೫೦೬) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೫–೧೬, ೨೦೧೬–೧೭ನೇ ಸಾಲಿನವರೆಗೆ ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಪಂಗಡ ಪ್ರಮಾಣ ಪತ್ರಕ್ಕಾಗಿ ಸ್ವೀಕರಿಸಿದ ಅರ್ಜಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಆ ಪೈಕಿ ಪ್ರಮಾಣ ಪತ್ರ ವಿತರಣೆಯಾದ ಹಾಗೂ ಬಾಕಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇಡಲು ಇರುವ ಕಾರಣಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಅರ್ಜಿಗಳಲ್ಲಿ ಪ್ರಮಾಣ ಪತ್ರ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಕಾರಣ ಸಹಿತ ಮಾಹಿತಿ ಒದಗಿಸುವುದು)

(ಈ) ಪ್ರಮಾಣ ಪತ್ರ ತಿರಸ್ಕೃತಗೊಳ್ಳಲು ಮುಖ್ಯಕಾರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಉ) ಔರಾದ್ ತಾಲ್ಲೂಕಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಪರಿಶಿಷ್ಟ ಪಂಗಡ ಪ್ರಮಾಣ ಪತ್ರದ ನಿರ್ವಾಹಕರು ಪತ್ರ ನೀಡುವಲ್ಲಿ ಸಾರ್ವಜನಿಕರಿಗೆ ಅನಗತ್ಯ ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ?

## ೯೪ಸಿ ಮತ್ತು ೯೪ಸಿಸಿ ಯೋಜನೆಯ ಅನುಷ್ಠಾನದ ವಿಳಂಬದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೫ (೩೭೪೭) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೯೪ಸಿ ಯೋಜನೆ ಜಾರಿ ಬಂದು ೨ ೧/೨ ವರ್ಷ ಸಂದರೂ ಹಕ್ಕುಪತ್ರ ವಿತರಿಸದೇ ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ರಾಜ್ಯದಲ್ಲಿ ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಸ್ವೀಕೃತವಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿಧಾನಸಭಾವಾರು ವಿವರ ನೀಡುವುದು)

(ಆ) ೯೪ಸಿ ಹಕ್ಕುಪತ್ರಕ್ಕೆ ಪಾವತಿಸಬೇಕಾದ ಶುಲ್ಕದ ನಿಗಧಿಗೆ ಇರುವ ನಿಯಮಗಳೇನು; ಸರ್ಕಾರ ಶುಲ್ಕ ಕಡಿತಗೊಳಿಸುವ ಆದೇಶ ಹೊರಡಿಸಿರುವುದರಿಂದ, ಈ ಹಿಂದೆ ಹೆಚ್ಚುವರಿ ವಸೂಲಾದ ಮೊತ್ತ ಅರ್ಜಿದಾರರಿಗೆ ಹಿಂದಿರುಗಿಸಲಾಗುವುದೇ ;

(ಇ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಮಂಜೂರಾದ ನಂತರ ಹಕ್ಕುಪತ್ರ ವಿತರಣೆ ಮಾಡಿದ ಮತ್ತು ಹಕ್ಕುಪತ್ರ ನೀಡಲು ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನಸಭಾವಾರು ವಿವರ ನೀಡುವುದು)

(ಈ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ತಿರಸ್ಕೃತವಾದ ಹಾಗೂ ತನಿಖೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವಿಧಾನಸಭಾವಾರು ವಿವರ ನೀಡುವುದು)

(ಉ) ೯೪ಸಿ ಮತ್ತು ೯೪ಸಿಸಿ ಯಡಿ ಸಿ.ಆರ್.ಝುಡ್, ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ. ಡೀಮ್ಡ್ ಫಾರೆಸ್ಟ್ ವ್ಯಾಪ್ತಿಗೆ ಒಳಪಡುವ ಒಟ್ಟು ಪ್ರಕರಣಗಳೆಷ್ಟು; ಸಿ.ಆರ್.ಝುಡ್., ಕುಮ್ಕಿ, ಗೋಮಾಳ, ಗೇರುಲೀಸ್, ಸಿ.ಎನ್.ಡಿ., ಡೀಮ್ಡ್ ಫಾರೆಸ್ಟ್ ಸಹಿತ ಅಡೆತಡೆ ವಿರಹಿತ ಪಡಿಸಿ ಹಕ್ಕುಪತ್ರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ೯೪ಸಿ ಮತ್ತು ೯೪ಸಿಸಿ ಯೋಜನೆಯಡಿ ಎಲ್ಲಾ ಅಡೆತಡೆಗಳನ್ನು ನಿವಾರಿಸಿ ಬಡವರಿಗೆ ಕಾಲಮಿತಿಯಲ್ಲಿ ಹಕ್ಕುಪತ್ರ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಸಹಾಯಕರನ್ನು ಗ್ರೂಪ್ 'ಡಿ' ಎಂದು ಪರಿಗಣಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೩೮೬ (೩೭೭೪) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಂದಾಯ ಇಲಾಖೆಯಡಿ ಎಷ್ಟು ಗ್ರಾಮ ಸಹಾಯಕರು ಕೆಲಸ ಮಾಡುತ್ತಿದ್ದಾರೆ ;

(ಆ) ಈ ಗ್ರಾಮ ಸಹಾಯಕರನ್ನು ಗ್ರೂಪ್ 'ಡಿ' ನೌಕರರೆಂದು ಪರಿಗಣಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಗ್ರಾಮ ಸಹಾಯಕರನ್ನು ಗ್ರೂಪ್ 'ಡಿ' ನೌಕರರೆಂದು ಪರಿಗಣಿಸಿ ಖಾಯಂಗೊಳಿಸಲು ಉದ್ದೇಶಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈ ಕುರಿತು ಯಾವಾಗ ಆದೇಶ ಹೊರಡಿಸಲಾಗುವುದು ?

## ಸರ್ವೇಯರ್‌ಗಳ ಬಗ್ಗೆ ಮಾಹಿತಿ ಕೋರಿ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೭ (೩೬೫೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳಲ್ಲಿ ಒಟ್ಟು ಕೆಲಸ ನಿರ್ವಹಿಸುತ್ತಿರುವ ಸರ್ವೇಯರ್‌ಗಳು ಎಷ್ಟು ; ಖಾಲಿ ಇರುವ ಸರ್ವೇಯರ್ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇಲ್ಲಿಯವರೆವಿಗೂ ಒಟ್ಟು ಸರ್ವೆಗಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು; ಇದರಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಹಾಗೆಯೇ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿಯಲು ಕಾರಣವೇನು; ಸಂಪೂರ್ಣ ಮಾಹಿತಿ ನೀಡುವುದು ?

## ಈಶಾನ್ಯ ಪದವೀಧರರ ಕ್ಷೇತ್ರದಲ್ಲಿ ಭೂಮಾಪಕರ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೮೮ (೩೭೭೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಈಶಾನ್ಯ ಪದವೀಧರರ ಕ್ಷೇತ್ರದ ಜಿಲ್ಲೆಗಳಲ್ಲಿ ಒಟ್ಟು ಮಂಜೂರಾಗಿರುವ ಭೂಮಾಪಕರ ಹುದ್ದೆಗಳೆಷ್ಟು ; ಇದರಲ್ಲಿ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರ ಈಶಾನ್ಯ ಪದವೀಧರರ ಕ್ಷೇತ್ರದ ಜಿಲ್ಲೆಗಳಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ತುಂಬಲು ಕ್ರಮಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳನ್ನು ತುಂಬಿಸಿಕೊಳ್ಳಲಾಗಿದೆ ; ಇಲ್ಲವಾದಲ್ಲಿ, ಯಾವಾಗ ನೇಮಕಾತಿ ಮಾಡಿಕೊಳ್ಳಲಾಗುವುದು ; (ವಿವರ ನೀಡುವುದು)

(ಇ) ಈಶಾನ್ಯ ಪದವೀಧರರ ಜಿಲ್ಲೆಗಳಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳಲ್ಲಿ ನೇರ ನೇಮಕಾತಿ ಹಾಗೂ ಮುಂಬಡ್ತಿಗಾಗಿ ಮೀಸಲಿಟ್ಟ ಹುದ್ದೆಗಳೆಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ೩೭೧(ಜೆ) ಅಡಿಯಲ್ಲಿ ಎಷ್ಟು ಹುದ್ದೆಗಳನ್ನು ಮೀಸಲಾತಿ ಕಲ್ಪಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ನೇರ ನೇಮಕಾತಿ ಪ್ರಕ್ರಿಯೆ ವಿಳಂಬವಾಗುತ್ತಿರುವುದರಿಂದ ಹಲವಾರು ಅರ್ಹ ಪದವೀಧರರು ವಯೋಮಿತಿ ಮೀರುವವರಿದ್ದು, ಸರ್ಕಾರ ಶೀಘ್ರ ನೇರ ನೇಮಕಾತಿ ಮೂಲಕ ಭೂಮಾಪಕರ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ಕೌಶಲ್ಯ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೩೮೯ (೩೭೧೧) ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೌಶಲ್ಯ ಅಭಿವೃದ್ಧಿಗಾಗಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು;

(ಆ) ಈ ಯೋಜನೆ ಕಾರ್ಯಾನ್ವಯಕ್ಕೆ ಕಳೆದ ೦೩ ವರ್ಷಗಳಲ್ಲಿ ಒದಗಿಸಿರುವ ಅನುದಾನ ವಿನಿಯೋಗಿಸಿದ ಅನುದಾನ ಎಷ್ಟು ;

(ಇ) ಕಳೆದ ೦೩ ವರ್ಷಗಳಿಂದ ಕೇಂದ್ರದಿಂದ ರಾಜ್ಯಕ್ಕೆ ಈ ಯೋಜನೆಗಳ ಅಡಿಯಲ್ಲಿ ಬಂದಿರುವ ಅನುದಾನ ಎಷ್ಟು ; ವಿನಿಯೋಗಿಸಿದ ಅನುದಾನ ಎಷ್ಟು ;

(ಈ) ಕೌಶಲ್ಯ ಅಭಿವೃದ್ಧಿ ಕಾರ್ಯವನ್ನು ಜಾರಿಗೊಳಿಸುತ್ತಿರುವ ಸಂಸ್ಥೆಗಳು ಯಾವುವು; ಅದಕ್ಕೆ ಇರುವ ಸರ್ಕಾರದ ನೀತಿ ಹಾಗೂ ಮಾನದಂಡಗಳೇನು ; (ಪ್ರತಿಯೊಂದು ಸಂಸ್ಥೆಗಳ ಹೆಸರು/ವಿಳಾಸ ಹಾಗೂ ಯಾವ ಯೋಜನೆಗಳನ್ನು ಜಾರಿಗೊಳಿಸುತ್ತಿವೆ ಎಂಬ ವಿವರ ನೀಡುವುದು)

(ಉ) ೩೭೧ಜೆ ಅಡಿಯಲ್ಲಿ ಉತ್ತರ ಕರ್ನಾಟಕದ ಹಿಂದುಳಿದ ತಾಲ್ಲೂಕುಗಳಲ್ಲಿ ಹಮ್ಮಿಕೊಂಡಿರುವ ವಿಶೇಷ ಕಾರ್ಯಕ್ರಮಗಳಾವುವು ? (ವಿವರ ನೀಡುವುದು)

## ರೈತರ ಜಮೀನುಗಳನ್ನು ಪೋಡಿ ಮಾಡಿಕೊಡಲು ವಸೂಲು ಮಾಡಿದ ಕೋಟ್ಯಾಂತರ ರೂಪಾಯಿ ಶುಲ್ಕದ ಹಣ ಕಣ್ಮರೆಯಾಗಿರುವ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೯೦ (೩೬೯೨+೩೬೯೧) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ರೈತರ ಜಮೀನುಗಳನ್ನು ಅಳತೆ ಮಾಡಿ ಪೋಡಿ ಮಾಡಿಕೊಡಲು ಸರ್ಕಾರವು ಶುಲ್ಕ ವಿಧಿಸಿ ವಸೂಲು ಮಾಡಿದ ಕೋಟ್ಯಾಂತರ ರೂಪಾಯಿ ಹಣ ಸರ್ಕಾರದ ಖಜಾನೆ ಸೇರದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ರೈತರಿಂದ ವಸೂಲು ಮಾಡಿದ ಕೋಟ್ಯಾಂತರ ರೂಪಾಯಿ ಹಣ ಏನಾಯಿತು ; ಇದನ್ನು ಪತ್ತೆ ಮಾಡಿ ವಸೂಲು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರೈತರು ತಮ್ಮ ಜಮೀನನ್ನು ಅಳತೆ ಮಾಡಿ ಪೋಡಿ ಮಾಡಿ, ಖಾತೆ ಮಾಡಿಕೊಡಲು ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಒಟ್ಟು ಎಷ್ಟು ಹಣವನ್ನು ಪಾವತಿಸಿರುತ್ತಾರೆ ;

(ಈ) ೨೦೧೪–೧೫, ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಎಕರೆ ಜಮೀನುಗಳು ಪೋಡಿಯಾಗಿವೆ ; ಎಕರೆಗೆ ಎಷ್ಟು ಶುಲ್ಕ ವಸೂಲು ಮಾಡಲಾದ ಮೊತ್ತ ಎಷ್ಟು ;

(ಉ) ಕಳೆದ ಮೂರು ವರ್ಷಗಳಿಂದ ಈ ರೀತಿ ಸರ್ವೆಗಾಗಿ ಪಾವತಿಸಿದ ಹಣವು ಖಜಾನೆಯಲ್ಲಿ ಸಂಪೂರ್ಣ ಜಮಾ ಆಗಿದೆಯೇ ; (ವಿವರ ನೀಡುವುದು) ಹಲವಾರು ಜಿಲ್ಲೆಗಳಲ್ಲಿ ರೈತರು ಕಟ್ಟಿದ ಹಣವನ್ನು ಖಜಾನೆಗೆ ಜಮಾ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಊ) ಸದರಿ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾ.ಸೂ. 660, ಪ್ರತಿಗಳು 1500